**ವಿಭಾಗೀಯ ಕಾರ್ಯದರ್ಶಿಗಳು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಹಾಗೂ ಪದನಿಮಿತ್ತ ಸಹನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಳಗಾವಿ ವಿಭಾಗ, ಬೆಳಗಾವಿ.**

---

ಸಂಖ್ಯೆ: ಇ3/ಪ್ರೌಶಾಶಿ/27/2009-10 ದಿನಾಂಕ: 21-05-2010

ಗೆ.
ಉಪನಿರ್ದೇಶಕರು,
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಳಗಾವಿ, ಚಿಕ್ಕೋಡಿ, ಗದಗ, ಧಾರವಾಡ, ಹಾವೇರಿ,
ಬಿಜಾಪೂರ, ಬಾಗಲಕೋಟ ಮತ್ತು ಉತ್ತರ ಕನ್ನಡ.

ವಿಷಯ: 2009-10 ನೇ ಸಾಲಿನ ಪ್ರೌಢಶಾಲಾ ಸಹಶಿಕ್ಷಕರ ಮತ್ತು ಸಂಗೀತ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದ ಅನುಷ್ಠಾನದ ಬಗ್ಗೆ.

ಉಲ್ಲೇಖ: 1) ಮಾನ್ಯ ನಿರ್ದೇಶಕರು (ಪ್ರೌಢ ಶಿಕ್ಷಣ) ಪತ್ರ ಸಂಖ್ಯೆ: ಸಿ4(1) ಪ್ರೌಶಾಶಿನೇ 11/2007-08 ದಿನಾಂಕ: 23-04-2010.
2) ಮಾನ್ಯ ನಿರ್ದೇಶಕರು (ಪ್ರೌಢ ಶಿಕ್ಷಣ) ಪತ್ರ ಸಂಖ್ಯೆ: ಸಿ4(1) ಪ್ರೌಶಾಶಿನೇ 11/2007-08 ದಿನಾಂಕ: 17-05-2010.

*****

2009-10 ನೇ ಸಾಲಿನ ಸರ್ಕಾರಿ ಪ್ರೌಢಶಾಲಾ ಸಹಶಿಕ್ಷಕರ ಗ್ರೇಡ್-2 ಮತ್ತು ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-1 ಹಾಗೂ ಗ್ರೇಡ್-2 ಸಂಗೀತ ಶಿಕ್ಷಕರ ಅಂತಿಮ ಆಯ್ಕೆಪಟ್ಟಿಯನ್ನು ದಿನಾಂಕ: 19-02-2010 ರಂದು ಪ್ರಕಟಿಸಲಾಗಿತ್ತು. ಈ ಹಿನ್ನಲೆಯಲ್ಲಿ ದಿನಾಂಕ: 19-05-2010 ರಿಂದ 22-05-2010 ರವರೆಗೆ ಕೌನ್ಸಿಲಿಂಗ್ ಮೂಲಕ ಸ್ಥಳ ಆಯ್ಕೆ ಪ್ರಕ್ರಿಯೆ ಮಾಡಿ, ದಿನಾಂಕ: 25-05-2010 ರಿಂದ 10-06-2010 ರವರೆಗೆ ವಸತಿ ಸಹಿತ ತರಬೇತಿ ನೀಡಲು ಉದ್ದೇಶಿಸಲಾಗಿತ್ತು.

ಆದರೆ, ಶಿಕ್ಷಕರ ಹಾಗೂ ಪದವೀಧರ ಕ್ಷೇತ್ರಕ್ಕೆ ಚುನಾವಣೆ ಪ್ರಯುಕ್ತ ದಿನಾಂಕ: 15-05-2010 ರಿಂದ 26-06-2010 ರವರೆಗೆ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ , ಈ ಬಗ್ಗೆ ಉಲ್ಲೇಖ-2 ರ ಪತ್ರದಲ್ಲಿ ಮಾನ್ಯ ನಿರ್ದೇಶಕರು (ಪ್ರೌಢ ಶಿಕ್ಷಣ) ಇವರು ದಿನಾಂಕ: 19-05-2010 ರಿಂದ 22-05-2010 ರವರೆಗೆ ನಡೆಯಬೇಕಾಗಿರುವ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಲು ತಿಳಿಸಿರುತ್ತಾರೆ, ಇದರಂತೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಮುಂದಿನ ಆದೇಶವಾಗುವರೆಗೆ ಸ್ಥಗಿತಗೊಳಿಸಲು ಸೂಚಿಸಿದೆ. ಸದರಿ ವಿಷಯವನ್ನು ತಮ್ಮ ಜಿಲ್ಲಾ ವ್ಯಾಪ್ತಿಯ ದಿನಪತ್ರಿಕೆ ಹಾಗೂ ಮಾಧ್ಯಮಗಳಲ್ಲಿ ಪ್ರಕಟಿಸುವಂತೆ ಕ್ರಮ ಕೈಕೊಳ್ಳುವುದು ಮತ್ತು ಸದರ ವಿಷಯವನ್ನು ಕಛೇರಿಯ ಸೂಚನಾ ಫಲಕಕ್ಕೆ ಅಂಟಿಸಿ ಸಾರ್ವಜನಿಕರ / ಅಭ್ಯರ್ಥಿಗಳ ಗಮನಕ್ಕೆ ತರಲು ಸೂಚಿಸಿದೆ.

21/5/10

(ಎ.ರುದ್ರಪ್ಪ)
**ವಿಭಾಗೀಯ ಕಾರ್ಯದರ್ಶಿಗಳು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಹಾಗೂ ಪದನಿಮಿತ್ತ ಸಹನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಳಗಾವಿ ವಿಭಾಗ, ಬೆಳಗಾವಿ.**